ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ______

ಪತ್ರಿಕೆಯ ಹೆಸರು : NAME OF THE NEWS PAPER: ______ ದಿನಾಂಕ : DATE : 13/2/21

# ಗೋಹತ್ಯೆ ನಿಷೇಧ ಕಾಯ್ದೆ ತಡೆಯಿರಿ

**» ರಾಜ್ಯಪಾಲರಿಗೆ ಮೇಲ್ಮನೆ ಕಾಂಗ್ರೆಸ್ ಸದಸ್ಯರ ಪತ್ರ**

ಬೆಂಗಳೂರು: ಗೋಹತ್ಯೆ ನಿಷೇಧ ಕಾಯ್ದೆಯನ್ನು ತಡೆಹಿಡಿಯುವಂತೆ ವಿಧಾನ ಪರಿಷತ್‌ನ ಕಾಂಗ್ರೆಸ್ ಸದಸ್ಯರು ರಾಜ್ಯಪಾಲರಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ.

ಫೆ.8ರಂದು ಮೇಲ್ಮನೆ ಕಲಾಪದ ಕಾರ್ಯಸೂಚಿಯಂತೆ ರಾಜ್ಯಪಾಲರ ಭಾಷಣದ ಮೇಲೆ ವಂದನಾ ನಿರ್ಣಯ ಕುರಿತ ಚರ್ಚೆ ವಿಷಯವಿತ್ತು. ಆದರೆ, ಉಪ ಸಭಾಪತಿ ಗೋಹತ್ಯೆ ನಿಷೇಧ ವಿಧೇಯಕ ಪರ್ಯಾಲೋಚನೆಗೆ ತೆಗೆದುಕೊಂಡರು. ಜೆಡಿಎಸ್ ಸದಸ್ಯರು ಕಲಾಪವನ್ನು ಮರುದಿನಕ್ಕೆ ಮುಂದೂಡುವಂತೆ ಒತ್ತಾಯಿಸುತ್ತಿದ್ದಾಗಲೇ ಮತ್ತು ಪ್ರತಿಪಕ್ಷ ಸದಸ್ಯರು ಧರಣಿ ನಿರತರಾದಾಗ ಕಾನೂನು ಸಚಿವರು ವಿಧೇಯಕದ ಪರ್ಯಾಲೋಚನೆ ಪ್ರಕ್ರಿಯೆ ಮುಗಿಸಿ, ಒಪ್ಪಿಗೆ ಪಡೆದುಕೊಂಡಿದ್ದಾರೆ ಎಂದು ದೂರಿನಲ್ಲಿ ವಿವರಿಸಲಾಗಿದೆ. ಸಭಾಪತಿ ಆಯ್ಕೆ ಪ್ರಕ್ರಿಯೆಯೂ ಸರಿಯಾಗಿ ನಡೆದಿಲ್ಲ ಎಂದು ಪತ್ರದಲ್ಲಿ ದೂರಲಾಗಿದೆ. ಮನವಿ ಪತ್ರಕ್ಕೆ ಕಾಂಗ್ರೆಸ್‌ನ ಪ್ರಕಾಶ್ ರಾಥೋಡ್, ನಸೀರ್ ಅಹ್ಮದ್, ಪಿ.ಆರ್. ರಮೇಶ್, ಎಂ.ನಾರಾಯಣಸ್ವಾಮಿ, ಹರಿಪ್ರಸಾದ್ ಸಹಿ ಮಾಡಿದ್ದಾರೆ.